ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಜ ನಿ : ಸುಮಪ : 2020-21** **ದಿನಾಂಕ : 28-08-2020**

# ಪತ್ರಿಕಾ ಪ್ರಕಟಣೆ

## ಶಿಕ್ಷಕ ಮಿತ್ರ ಆ್ಯಪ್, ಶಿಕ್ಷಣ ಸಚಿವರ ಕುರಿತ ವಿಮರ್ಶಾ ವಿದ್ಯಾವಿನೀತ ಪುಸ್ತಕ, ಅಂಕಣ ಬರಹದ ಸಂಗ್ರಹ-ಶಿಕ್ಷಣಯಾತ್ರೆ-ಪುಸ್ತಕ ಲೋಕಾರ್ಪಣೆ

**ಬೆಂಗಳೂರು, ಆಗಸ್ಟ್ 28(ಕರ್ನಾಟಕ ವಾರ್ತೆ):**

ಶಿಕ್ಷಕರು ತಮ್ಮ ಕೆಲಸಗಳಿಗಾಗಿ ಶಾಲೆಗಳಿಗೆ ರಜೆ ಹಾಕಿ ಇಲಾಖೆಯ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸುವ ಸಲುವಾಗಿ ಶಿಕ್ಷಕರುಗಳಿಗೆ ಅನುಕೂಲವಾಗುವಂತೆ ಸಾರ್ವಜನಿಕ ಶಿಕ್ಷಣ ಇಲಾಖೆ ತಂತ್ರಜ್ಞಾನಾಧಾರಿತ ಶಿಕ್ಷಕ ಮಿತ್ರ-ಆಪ್ ತಯಾರಿಸಿದೆ.

ಇಂದು ವಿಧಾನಸೌಧದಲ್ಲಿ ಶಿಕ್ಷಕ ಮಿತ್ರ ಆ್ಯಪ್ ಲೋಕಾರ್ಪಣೆ ಮತ್ತು ಶಿಕ್ಷಣ ಸಚಿವರ ಕುರಿತ ವಿಮರ್ಶಾ ಪುಸ್ತಕ ವಿದ್ಯಾವಿನೀತ ಪುಸ್ತಕ ಹಾಗೂ ಸಚಿವರ ಅಂಕಣ ಬರಹದ ಸಂಗ್ರಹ-ಶಿಕ್ಷಣಯಾತ್ರೆ-ಪುಸ್ತಕವನ್ನು ಮುಖ್ಯ ಮಂತ್ರಿ ಯಡಿಯೂರಪ್ಪ ಅವರು ಲೋಕಾರ್ಪಣೆ ಮಾಡಿ ಮಾತನಾಡುತ್ತಾ ಶಿಕ್ಷಕರು ಮೊಬೈಲ್‌ನಲ್ಲಿ ಶಿಕ್ಷಕ ಮಿತ್ರ ಆಪ್‌ನ್ನು ಡೌನ್‌ಲೋಡ್ ಮಾಡಿಕೊಂಡು ತಾವು ಕುಳಿತಲ್ಲೇ ತಮ್ಮ ಸೇವಾ ವಿಷಯಗಳನ್ನು, ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದಾಗಿದೆ. ಆಪ್ ಮೂಲಕ ನಿರ್ದಿಷ್ಟ ಸಮಸ್ಯೆಗಳನ್ನು ಇಂತಿಷ್ಟು ದಿನಗಳಲ್ಲಿ ಬಗೆಹರಿಸುವ ಬಗ್ಗೆ ಕಾಲಾವಧಿ ನಿರ್ಧರಿಸಲಾಗಿದೆ. ಈ ಬಾರಿಯಿಂದ ಸಾರ್ವತ್ರಿಕ ವರ್ಗಾವಣೆ ಅರ್ಜಿಯನ್ನು ಸಹ ಈ ಶಿಕ್ಷಕ ಮಿತ್ರ- ಆಪ್ ಮೂಲಕವೇ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು

ಶಿಕ್ಷಣ ಸಚಿವ ಸುರೇಶ್ ಕುಮಾರ್ ಅವರ ಕುರಿತು ನಾಡಿನ ಹಲವಾರು ಲೇಖಕರು ಬರೆದಿರುವ ವಿಮರ್ಶಾ ಕೃತಿ ವಿದ್ಯಾವಿನೀತ ಪುಸ್ತಕವು ಸಚಿವರ ಹೆಸರು ಅವರ ವ್ಯಕ್ತಿತ್ವ, ಸ್ವಭಾವಕ್ಕೆ ಕನ್ನಡಿ ಹಿಡಿದಂತಿದೆ. ಇದು ಅವರ ಗುಣಸ್ವಭಾವಕ್ಕೆ ಅನ್ವರ್ಥವಾಗಿದೆ ಎಂದರು.

ಶಿಕ್ಷಣ ಇಲಾಖೆಯನ್ನು ಒಂದು ಚೌಕಟ್ಟಿಗೆ ಒಳಪಡಿಸಿ ಶಿಕ್ಷಕ ಸ್ನೇಹಿ, ಶಿಕ್ಷಣ ಸ್ನೇಹಿ ಮತ್ತು ವಿದ್ಯಾರ್ಥಿ ಸ್ನೇಹಿಯಾಗಿ ಕೆಲಸ ಮಾಡಿ ಜನಪ್ರಿಯರಾಗಿದ್ದಾರೆ. ಶಿಕ್ಷಕರ ವರ್ಗಾವಣೆ ನೀತಿಯನ್ನು ಸರಳೀಕರಣಗೊಳಿಸಿ ಶಿಕ್ಷಕರಿಗೆ ನೆಮ್ಮದಿ ತಂದಿದ್ದಾರೆ. ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಪರೀಕ್ಷೆಗಳನ್ನು ಕೋವಿಡ್ ವಿಷಮ ಕಾಲಘಟ್ಟದಲ್ಲಿಯೂ ಯಶಸ್ವಿಯಾಗಿ ನಡೆಸಿದ್ದಾರೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಜನಪರ ಕಾಳಜಿಯ ಸುರೇಶ್ ಕುಮಾರ್ ಅವರ ವ್ಯಕ್ತಿತ್ವ, ಇಲಾಖೆಯಲ್ಲಿನ ಅವರ ಸಾಧನೆ, ಅವರ ಸ್ವಭಾವವನ್ನು ಈ ಪುಸ್ತಕದಲ್ಲಿ ತಮ್ಮ ಲೇಖನಗಳ ಮೂಲಕ ಹಂಚಿಕೊಂಡಿದ್ದಾರೆ. ಶಿಕ್ಷಣ ಸಚಿವರಾದ ನಂತರ ಇಲಾಖೆಯ ಕುರಿತು ಆಯಾ ಸಂದರ್ಭದಲ್ಲಿ ತಾವು ನಾಡಿನ ವಿವಿಧ ಪತ್ರಿಕೆಗಳಿಗೆ ಬರೆದ ಲೇಖನಗಳ ಸಂಗ್ರಹ ಶಿಕ್ಷಣ ಯಾತ್ರೆ ಪುಸ್ತಕದ ಲೇಖನಗಳು ಶಿಕ್ಷಕರಿಗೆ, ಪೋಷಕರಿಗೆ, ನಾಡಿನ ಜನರಿಗೆ ವಿಶೇಷವಾಗಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶಿಯಾಗಿವೆ.

ಒಬ್ಬ ಸಚಿವರು ಹೇಗೆ ಜನಮುಖಿಯಾಗಿ ಕೆಲಸ ಮಾಡಬಹುದೆಂಬುದಕ್ಕೆ ಸುರೇಶ್ ಕುಮಾರ್ ಮಾದರಿಯಾಗಿದ್ದಾರೆ. ಸುರೇಶ್ ಕುಮಾರ್ ಅವರ ಸತ್ಕಾರ್ಯಗಳು ಮುಂದುವರೆಯಲಿ ಎಂದು ಅವರು ಹಾರೈಸಿದರು.

ಕಾರ್ಯಕ್ರಮದಲ್ಲಿ ಶಿಕ್ಷಣ ಸಚಿವ ಸುರೇಶ್ ಕುಮಾರ್, ವಿಧಾನಸಭೆಯ ಸದಸ್ಯರುಗಳಾದ ನಾರಾಯಣ ಸ್ವಾಮಿ, ಅರುಣ್ ಶಹಾಪುರ ಇಲಾಖಾ ಪ್ರಧಾನ ಕಾರ್ಯಕರ್ಶಿಗಳಾದ ಉಮಾಶಂಕರ್, ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

## ಸಹಾಯವಾಣಿ–ಶಿಕ್ಷಣ ವಾಣಿ ಕೇಂದ್ರಕ್ಕೆ ಚಾಲನೆ: ಸಚಿವ ಎಸ್. ಸುರೇಶ್ ಕುಮಾರ್

**ಬೆಂಗಳೂರು, ಆಗಸ್ಟ್ 28(ಕರ್ನಾಟಕ ವಾರ್ತೆ):**

ಶಿಕ್ಷಣವಾಣಿಯು  ಸಾರ್ವಜನಿಕ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಲು ಮತ್ತು ಅವುಗಳನ್ನು ನಿಗದಿತ ಅವಧಿಯಲ್ಲಿ ತ್ವರಿತವಾಗಿ ಪರಿಹರಿಸುವ ನಿಟ್ಟಿನಲ್ಲಿ ಕುಂದು-ಕೊರತೆ ನಿವಾರಣೆಗೆ ವೇದಿಕೆಯನ್ನು ಕಲ್ಪಸುತ್ತಿದೆ ಎಂದು ಪ್ರಾಥಮಿಕ ಮತ್ತು ಪೌಢಶಿಕ್ಷಣ ಸಚಿವರಾದ ಎಸ್. ಸುರೇಶ್ ಕುಮಾರ್ ಅವರು  ಇಂದು ಸಹಾಯವಾಣಿ-ಶಿಕ್ಷಣ ವಾಣಿ ಕೇಂದ್ರಕ್ಕೆ ಚಾಲನೆ ನೀಡಿ, ಶಿಕ್ಷಣ ಯಾತ್ರೆ  ಪುಸ್ತಕವನ್ನು ಬಿಡುಗಡೆ ಮಾಡಿ ಮಾತನಾಡಿದರು.

ಅಹವಾಲನ್ನು ನೊಂದಾಯಿಸುವುದು:  ಸಾರ್ವಜನಿಕರು, ವಿದ್ಯಾರ್ಥಿಗಳು, ಇಲಾಖಾ ಸಿಬ್ಬಂದಿ, ಎಸ್.ಡಿಎಂ.ಸಿ., ಪೋಷಕರು ಪ್ರಾಥಮಿಕ ಮತ್ತು  ಪ್ರೌಢ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ತಮ್ಮ ಅಹವಾಲನ್ನು ನೊಂದಾಯಿಸಬಹುದಾಗಿರುತ್ತದೆ.

ಇಲಾಖೆಯು ಅಭಿವೃದ್ಧಿ ಪಡಿಸಿದ ಕುಂದು-ಕೊರತೆ ನಿವಾರಣಾ ವ್ಯವಸ್ಥೆ (**Grievance Redressal System**) ತಂತ್ರಾಂಶವಾದ ಶಿಕ್ಷಣ ವಾಣಿ ತಂತ್ರಾಂಶದ ಮೂಲಕ ದೂರುದಾರರು ನೇರವಾಗಿ ತಮ್ಮ ಅಹವಾಲನ್ನು ನೊಂದಾಯಿಸಲು ಅವಕಾಶ ಕಲ್ಪಿಸಲಾಗಿದೆ. ಮೊಬೈಲ್ ಸಂಖ್ಯೆಯನ್ನು ದುರುಪಯೋಗಪಡಿಸಿಕೊಳ್ಳದಂತೆ ದೂರನ್ನು ದಾಖಲಿಸಲು ದೂರುದಾರರು ತಮ್ಮ ನೊಂದಾಯಿತ ಮೊಬೈಲ್ ಸಂಖ್ಯೆಗೆ ಬರುವ ಒಟಿಪಿಯನ್ನು ದಾಖಲಿಸುವುದು ಕಡ್ಡಾಯಗೊಳಿಸಿದೆ.

ಸಾರ್ವಜನಿಕರು ಇಲಾಖೆಯ ಪ್ರಕಟಿಸಿರುವ ವಾಟ್ಸ್ಯಾಪ್ ಸಂಖ್ಯೆ-9483045130 ಗೆ ಸಂದೇಶ ಕಳಿಸುವ ಮೂಲಕ, shikshanavani.edn@gmail.com  ಗೆ ಸಂದೇಶ ಕಳಿಸುವ ಮೂಲಕವೂ ತಮ್ಮ ಅಹವಾಲನ್ನು ನೊಂದಾಯಿಸಬಹುದಾಗಿದೆ.

ತಂತ್ರಜ್ಞಾನ ಬಳಕೆಯ ಅನಾನುಕೂಲ ಇರುವವರಿಗೆ ಇಲಾಖೆಯು ನೀಡಿರುವ ಟೋಲ್ ಫ್ರೀ ಸಂಖ್ಯೆ 1800-425-7302 ಗೆ ಕರೆ ಮಾಡುವ ಮೂಲಕ ತಮ್ಮ ಅಹವಾಲನ್ನು ನೊಂದಾಯಿಸಲು ಅವಕಾಶ ಕಲ್ಪಿಸಲಾಗಿದೆ. ಸಾರ್ವಜನಿಕರು ಟೋಲ್ ಫ್ರೀ ದೂರವಾಣಿ ಸಂಖ್ಯೆಗೆ ಕರೆ ಮಾಡಿದ ಸಂದರ್ಭದಲ್ಲಿ ಕರೆ ಕೇಂದ್ರದ ನುರಿತ ಸಿಬ್ಬಂದಿಯು ಅಗತ್ಯ ಸಂಪರ್ಕ ಮಾಹಿತಿ ಪಡೆದು ಶಿಕ್ಷಣ ವಾಣಿ ತಂತ್ರಾಂಶದಲ್ಲಿ ಅಹವಾಲನ್ನು ದಾಖಲಿಸುತ್ತಾರೆ.

ಶಿಕ್ಷಣವಾಣಿ ಕಾರ್ಯ ವೈಖರಿ: ಸಾರ್ವಜನಿಕರು ಮೇಲೆ ತಿಳಿಸಿದ ಎಲ್ಲಾ ವಿಧಾನಗಳ ಮೂಲಕ ಅಹವಾಲನ್ನು ದಾಖಲಿಸುವುದರೊಂದಿಗೆ ಇಲಾಖೆಯ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಪ್ರಗತಿ ತಮ್ಮ ಅಮೂಲ್ಯ ಸಲಹೆಗಳನ್ನು ದಾಖಲಿಸಲೂ ಅವಕಾಶ ನೀಡಲಾಗಿದೆ. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ

ಇಲಾಖೆಗೆ ಸಂಬಂಧಿಸಿದಂತೆ ಯಾವುದೇ ಮಾಹಿತಿ ಬೇಕಾದಲ್ಲಿ ಶಿಕ್ಷಣ ವಾಣಿಯ ಟೋಲ್ ಫ್ರೀ ದೂರವಾಣಿ ಸಂಖ್ಯೆಗೆ ಕರೆ ಮಾಡುವ ಮೂಲಕ ಮಾಹಿತಿಯನ್ನು ಪಡೆಯಬಹುದಾಗಿರುತ್ತದೆ.

ಮೇಲ್ಕಾಣಿಸಿದ ಯಾವುದೇ ವಿಧಾನದಿಂದ ತಮ್ಮ ಅಹವಾಲು ನೊಂದಾಯಿಸಿದ ತಕ್ಷಣ ದೂರುದಾರರ ನೊಂದಾಯಿತ ಮೊಬೈಲ್ ಸಂಖ್ಯೆಗೆ ದೂರಿನ ನೊಂದಣೆ ಸಂಖ್ಯೆ ರವಾನೆಯಾಗುವುದು ಮತ್ತು ಸಂಬಂಧಪಟ್ಟ ಅಧಿಕಾರಿಯ ಲಾಗಿನ್ ಗೆ ಸ್ವಯಂಚಾಲಿತವಾಗಿ ಅಹವಾಲು ವರ್ಗಾವಣೆಯಾಗುವುದು.

ನೊಂದಾಯಿತ ಮೊಬೈಲ್ ಸಂಖ್ಯೆಗೆ ಕಳುಹಿಸುವ ದೂರಿನ ಐಡಿ ಸಂಖ್ಯೆಯನ್ನು ಅಥವಾ ನೊಂದಾಯಿತ ಮೊಬೈಲ್ ಸಂಖ್ಯೆಯನ್ನು ಬಳಸಿ ಸಾರ್ವಜನಿಕರು ತಮ್ಮ ದೂರಿನ ಸ್ಥಿತಿಗತಿಯನ್ನು ತಿಳಿಯಬಹುದಾಗಿರುತ್ತದೆ.

ಪ್ರತಿಯೊಂದು ದೂರಿಗೂ ಪರಿಹಾರ ನೀಡಲು ಅವಧಿಯನ್ನು ನಿಗದಿಪಡಿಸಲಾಗಿದೆ ಮತ್ತು ನಿಗದಿತ ಅವಧಿಯೊಳಗೆ ಸಾರ್ವಜನಿಕರು/ವಿದ್ಯಾರ್ಥಿಗಳು/ಸಿಬ್ಬಂದಿಯ ಅಹವಾಲಿಗೆ ಪರಿಹಾರ ನೀಡಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಯಾವುದೇ ಅಹವಾಲು ನಿಗದಿತ ಅವಧಿಯೊಳಗೆ ಪರಿಹರಿಸದಿದ್ದಲ್ಲಿ ಅದನ್ನು ಸ್ವಯಂಚಾಲಿತವಾಗಿ ಮುಂದಿನ ಹಂತದ ಅಧಿಕಾರಿಗೆ ವರ್ಗಾಯಿಸಲಾಗುವುದು. ಒಟ್ಟಾರೆಯಾಗಿ ಸಾರ್ವಜನಿಕರ ಅಹವಾಲಿಗೆ ನಿಯಮಾನುಸಾರ ಪರಿಹಾರ ನೀಡಲು ಅಗತ್ಯ ಕ್ರಮ ವಹಿಸಲಾಗಿದೆ.

ಅಹವಾಲಿನ ಪ್ರತಿ ಹಂತದ ಸ್ಥಿತಿಯನ್ನು ಸಂಬಂಧಿಸಿದ ದೂರುದಾರರಿಗೆ ಮೊಬೈಲ್ ಸಂದೇಶದ ಮೂಲಕ ತಿಳಿಸಲಾಗುವುದು.

ಯಾವುದೇ ಅಹವಾಲಿಗೆ ಸಂಬಂಧಿಸಿದ ಅಧಿಕಾರಿಯು ಪರಿಹಾರ ನೀಡಿ ಮುಕ್ತಾಯಗೊಳಿಸಿದ ನಂತರ ಅವರು ನೀಡಿದ ಪರಿಹಾರವು ತೃಪ್ತಿಕರವಾಗದಿದ್ದಲ್ಲಿ ದೂರುದಾರರಿಗೆ ಅದೇ ದೂರನ್ನು ಪುನ: ತೆರೆಯಲು ಅವಕಾಶ ಕಲ್ಪಿಸಲಾಗಿದೆ. ದೂರುಗಳು ನಿಗದಿತ ಅವಧಿಯಲ್ಲಿ ನಿವಾರಣೆಯಾಗದಿದ್ದಲ್ಲಿ ಸ್ವಯಂಚಾಲಿತವಾಗಿ ಮೇಲಧಿಕಾರಿಗಳು/ಇಲಾಖಾ ಮುಖ್ಯಸ್ಥರಿಗೆ ವರ್ಗಾವಣೆಯಾಗುತ್ತದೆ.

ಶಿಕ್ಷಣವಾಣಿಯಲ್ಲಿ ದಾಖಲಿಸಬಹುದಾದ ಅಹವಾಲುಗಳ ವಿಧ: ಶಿಕ್ಷಣ ವಾಣಿ ತಂತ್ರಾಂಶವನ್ನು ಸಾರ್ವಜನಿಕ ಸ್ನೇಹಿಯಾಗಿ ಅಭಿವೃದ್ಧಿಪಡಿಸಲಾಗಿದ್ದು ತಮ್ಮ ಅಹವಾಲನ್ನು ನಿಖರವಾಗಿ ದಾಖಲಿಸಲು ಅನುಕೂಲವಾಗುವಂತೆ ಈಗಾಗಲೇ ನಿರೀಕ್ಷಿತ ದೂರುದಾರರನ್ನು ಸಮುದಾಯ,

ಶಾಲೆ, ಸಿಬ್ಬಂದಿ, ವಿದ್ಯಾರ್ಥಿಗಳು, ಎಸ್.ಡಿ.ಎಂ.ಸಿ., ಎಂದು ಐದು ವರ್ಗಗಳಾಗಿ ವಿಂಗಡಿಸಲಾಗಿದೆ ಮತ್ತು ಅವುಗಳನ್ನು ವಿಷಯಾಧಾರಿತವಾಗಿ ಉಪವರ್ಗಗಳಾಗಿ ಪಟ್ಟಿ ಮಾಡಲಾಗಿದೆ.

ಸರ್ಕಾರಿ, ಖಾಸಗಿ ಅನುದಾನಿತ, ಖಾಸಗಿ ಅನುದಾನರಹಿತ ಶಲೆಗಳು ಹಾಗೂ ಶಿಕ್ಷಣ ಇಲಾಖೆಯ ಕಛೇರಿಗಳಿಗೆ ಸಂಬಂಧಿಸಿದ ಶಾಲೆಯ ಭೌತಿಕ ಸೌಲಭ್ಯ, ಶೈಕ್ಷಣಿಕ ಸಂಸ್ಥೆಗಳು, ಸರ್ಕಾರದಿಂದ ನೀಡಲಾಗುತ್ತಿರುವ ಪ್ರೋತ್ಸಾಹದಾಯಕ ಯೋಜನೆಗಳ ಬಗ್ಗೆ, ಆಡಳಿತಾತ್ಮಕ ವಿಷಯಗಳು, ಶಾಲೆ ಅಥವಾ ಸಿಬ್ಬಂದಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಸಾರ್ವಜನಿಕರು ತಮ್ಮ ಅಗತ್ಯತೆಗನುಗುಣವಾಗಿ ಆಯ್ಕೆ ಮಾಡಿಕೊಂಡು ಅಹವಾಲನ್ನು ದಾಖಲಿಸಬಹುದಾಗಿರುತ್ತದೆ.

ವಿದ್ಯಾರ್ಥಿಗಳು ತಮ್ಮ ಶಾಲೆಯ ಭೌತಿಕ ಸೌಲಭ್ಯಗಳು, ಶೈಕ್ಷಣಿಕ ಸೌಲಭ್ಯಗಳು, ಬೋಧನಾ ವಿಧಾನ, ಶಾಲಾ ಸಿಬ್ಬಂದಿಯ ದುರ್ವರ್ತನೆ, ಶಾಲೆಯ ಅಗತ್ಯತೆಗಳು, ಮಕ್ಕಳ ಹಕ್ಕುಗಳು ಮುಂತಾದ ವಿಷಯಗಳಿಗೆ ಸಂಬಂಧಿಸಿದಂತೆ ತಮ್ಮ ಅಹವಾಲನ್ನು ದಾಖಲಿಸಬಹುದಾಗಿರುತ್ತದೆ.

ಇಲಾಖಾ ಸಿಬ್ಬಂದಿಯು ತಮ್ಮ ದೂರುಗಳನ್ನು ದಾಖಲಿಸುವ ಸಂದರ್ಭದಲ್ಲಿ ಮೇಲ್ಕಂಡ ಎಲ್ಲಾ ಅಂಶಗಳ ಜೊತೆಗೆ ತಮ್ಮ ಸೇವಾ ಸೌಲಭ್ಯಗಳ ನಿಗದಿತ ಅವಧಿಯಲ್ಲಿ ದೊರೆಯಲು ಉಂಟಾಗಿರುವ ಅಡೆತಡೆಗಳಿಗೆ ಸಂಬಂಧಿಸಿದಂತೆಯೂ ಅಹವಾಲು ದಖಲಿಸಲು ಅವಕಾಶ ಕಲ್ಪಿಸಲಾಗಿದೆ.

ಮನವಿದಾರರ ಅಗತ್ಯತೆಯಂತೆ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ವಿಷಯಗಳನ್ನು ಸೇರಿಸಲು ಅವಕಾಶವಿರುತ್ತದೆ.

ಶಿಕ್ಷಣವಾಣಿ ಕೇಂದ್ರದ ನಿರ್ವಹಣೆ : ಶಿಕ್ಷಣ ವಾಣಿ ತಂತ್ರಾಂಶ, ವಾಟ್ಸ್ಯಪ್ ಸಂಖ್ಯೆ, ಈ–ಮೇಲ್ ಮೂಲಕ 24/7 ಅಹವಾಲು ದಾಖಲಿಸು ಅವಕಾಶ ಕಲ್ಪಿಸಲಾಗಿದೆ.

ಆದರೆ ಕರೆ ಕೇಂದ್ರವು ಬೆಳಿಗ್ಗೆ 90.00 ಗಂಟೆಯಿಂದ ಸಾಯಂಕಾಲ 7.00 ಗಂಟೆಯ ವರೆಗೆ ಎರಡು ಶಿಫ್ಟ್ ಗಳಲ್ಲಿ ಕಾರ್ಯ ನಿರ್ವಹಿಸುತ್ತದೆ. ಪ್ರಾರಂಭಿಕ ಹಂತದಲ್ಲಿ ಐದು ಜನ ತರಬೇತಿ ಹೊಂದಿದ ಸಿಬ್ಬಂದಿಯು ಕರೆ ಕೇಂದ್ರದಲ್ಲಿ ಕಾರ್ಯನಿರ್ವಹಿಸಲಿದ್ದಾರೆ.

ಅಗತ್ಯತೆಗನುಗುಣವಾಗಿ ಮುಂದಿನ ದಿನಗಳಲ್ಲಿ ಸಿಬ್ಬಂದಿ ಸಂಖ್ಯೆಯನ್ನು ಹೆಚ್ಚಿಸಲು ಅವಕಾಶವಿರುತ್ತದೆ.

ಕುಂದುಕೊರತೆ ನಿವಾರಣಾ ವ್ಯವಸ್ಥೆ ಶಿಕ್ಷಣವಾಣಿಯ ಮೆಲ್ವಿಚಾರಣೆಗಾಗಿ ಎಲಾಖೆಯ ಇಬ್ಬರು ಹಿರಿಯ ಸಹಾಯಕ ನಿರ್ದೇಶಕರು ಕಾರ್ಯ ನಿರ್ವಹಿಸಲಿದ್ದಾರೆ. ಒಟ್ಟಾರೆಯಾಗಿ ಪ್ರತಿ

ಹಂತದಲ್ಲಿಯೂ ಸಾರ್ವಜನಿಕರು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗೆ ಅನುಕೂಲಿಸುವ ನಿಟ್ಟಿನಲ್ಲಿ ಶಿಕ್ಷಣವಾಣಿಯು ಕಾರ್ಯನಿರ್ವಹಿಸಲಿದೆ ಎಂದು ಸಚಿವರು ಹೇಳಿದರು

ಶಿಕ್ಷಣ ಸಚಿವ ಸುರೇಶ್ ಕುಮಾರ್, ವಿಧಾನಪರಿಷತ್ ಸದಸ್ಯರುಗಳು ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

## ಮೈಸೂರು ಮೃಗಾಲಯ ಎಲ್ಲಾ ಪ್ರಾಣಿಗಳ ಒಂದು ದಿನದ ಆಹಾರ ನಿರ್ವಹಣೆ

**ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :**

ಜಗದ್ಗುರು ಡಾ: ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 105 ನೇ ಜಯಂತಿ ಮಹೋತ್ಸವ ಶುಭ ಸಂದರ್ಭವಾದ ಆಗಸ್ಟ್ 29 ರಂದು ಶ್ರೀ ಚಾಮರಾಜೇಂದ್ರ ಮೃಗಾಲಯ, ಮೈಸೂರು ಇಲ್ಲಿಗೆ ಎಲ್ಲಾ ಪ್ರಾಣಿಗಳ ಒಂದು ದಿನದ ಆಹಾರ ನಿರ್ವಹಣೆಯ ವೆಚ್ಚಕ್ಕಾಗಿ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರು ಅನುಗ್ರಹ ಪೂರ್ವಕವಾಗಿ ಶ್ರೀಮಠದ ವತಿಯಿಂದ ಒಂದು ಲಕ್ಷ ರೂ. ಗಳ ಕೊಡುಗೆಯನ್ನು ಶ್ರೀ ಚಾಮರಾಜೇಂದ್ರ ಮೃಗಾಲಯಕ್ಕೆ ನೀಡಿರುತ್ತಾರೆ. ಇವರು ಸತತ 11 ವರ್ಷಗಳ ಕಾಲ ಈ ಕೊಡುಗೆಯನ್ನು ನೀಡಿರುತ್ತಾರೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## 2019ನೇ ವರ್ಷದ ಪುಸ್ತಕ ಬಹುಮಾನಕ್ಕಾಗಿ ಕೃತಿಗಳ ಆಹ್ವಾನ

**ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :**

ಕರ್ನಾಟಕ ಸಾಹಿತ್ಯ ಅಕಾಡೆಮಿಯು ಪ್ರತಿ ವರ್ಷದಂತೆ 2019ನೇ ವರ್ಷದ ಪುಸ್ತಕ ಬಹುಮಾನ ಯೋಜನೆಗಾಗಿ ಪುಸ್ತಕಗಳನ್ನು ಸಲ್ಲಿಸಲು ಅರ್ಜಿ ಆಹ್ವಾನಿಸಿದೆ.

ಪ್ರತಿ ಪ್ರಕಾರದಲ್ಲಿ ವಿಮರ್ಶಕರು ಆಯ್ಕೆ ಮಾಡುವ ಒಂದು ಕೃತಿಗೆ ಬಹುಮಾನ ನೀಡಲಾಗುವುದು. ಬಹುಮಾನಕ್ಕೆ ಸಲ್ಲಿಸುವ ಕೃತಿಗಳು 2019ರ ಜನವರಿ 1 ರಿಂದ 2019ರ ಡಿಸೆಂಬರ್ 31 ರೊಳಗೆ ಪ್ರಥಮ ಆವೃತ್ತಿಯಾಗಿ ಪ್ರಕಟವಾಗಿರುವ ಕೃತಿಗಳಾಗಿರಬೇಕು. ಕೃತಿಯಲ್ಲಿ ಪ್ರಥಮ ಮುದ್ರಣ 2019 ಎಂದು ಮುದ್ರಿತವಾಗಿರಬೇಕು.

ಕಾವ್ಯ, ನವಕವಿಗಳ ಪ್ರಥಮ ಕವನ ಸಂಕಲನ, ಕಾವ್ಯ ಹಸ್ತಪ್ರತಿ–30 ವರ್ಷ ಒಳಗಿರುವ ಯುವ ಕವಿಗಳು ತಮ್ಮ ಅಪ್ರಕಟಿತ ಪ್ರಥಮ ಕವನ ಸಂಕಲನದ ಹಸ್ತಪ್ರತಿಯನ್ನು ಕಳುಹಿಸಿಕೊಡಬೇಕು. ಕಾದಂಬರಿ, ಸಣ್ಣಕಥೆ, ನಾಟಕ, ಲಲಿತ ಪ್ರಬಂಧ, ಪ್ರವಾಸ ಸಾಹಿತ್ಯ, ಜೀವನ ಚರಿತ್ರೆ–ಆತ್ಮ ಕಥೆ, ಸಾಹಿತ್ಯ ವಿಮರ್ಶೆ, ಗ್ರಂಥ ಸಂಪಾದನೆ, ಮಕ್ಕಳ ಸಾಹಿತ್ಯ, ವಿಜ್ಞಾನ ಸಾಹಿತ್ಯ, ಮಾನವಿಕ, ಸಂಶೋಧನೆ, ವೈಚಾರಿಕ–ಅಂಕಣ ಬರಹ, ಅನುವಾದ–1,2. ಲೇಖಕರ ಮೊದಲ ಸ್ವತಂತ್ರ ಕೃತಿಗೆ ಬಹುಮಾನ–2019 ರಲ್ಲಿ ಪ್ರಕಟವಾದ ಹೊಸ ಬರಹಗಾರರ ಮೊದಲ ಸ್ವತಂತ್ರ ಕೃತಿಯೆಂದು ಖಾತರಿಪಡಿಸುವ ದೃಢೀಕರಣ ಪತ್ರ ಲಗತ್ತಿಸಬೇಕು. ಕನ್ನಡದಿಂದ ಇಂಗ್ಲೀಷಿಗೆ ಅನುವಾದ, ದಾಸ ಸಾಹಿತ್ಯಕ್ಕೆ ಸಂಬಂಧಿಸಿದ ಸೃಜನ–ಸೃಜನೇತರ ಕೃತಿಗಳನ್ನು ಸಲ್ಲಿಸಬಹುದು.

ಮರುಮದ್ರಣವಾದ ಪುಸ್ತಕಗಳಾಗಿರಬಾರದು. ಪಿ.ಹೆಚ್.ಡಿ ಪದವಿಗಾಗಿ ಸಿದ್ಧಪಡಿಸಿದ ಸಂಶೋಧನ ಗ್ರಂಥಗಳಾಗಿರಬಾರದು. ಪಠ್ಯ ಪುಸ್ತಕಗಳಾಗಿರಬಾರದು. ಅಕಾಡೆಮಿಯ ಗೌರವ ಪ್ರಶಸ್ತಿ, ಪುರಸ್ಕೃತ ಸಾಹಿತಿಗಳ ಕೃತಿಗಳಾಗಿರಬಾರದು. ಈಗಾಗಲೇ ಕರ್ನಾಟಕ ಸಾಹಿತ್ಯ ಅಕಾಡೆಮಿಯಿಂದ ಒಟ್ಟಾರೆ ಮೂರು ಬಾರಿ ಪುಸ್ತಕ ಬಹುಮಾನ ಪಡೆದವರ ಕೃತಿಗಳಾಗಿರಬಾರದು. ಒಂದು ಪ್ರಕಾರದಲ್ಲಿ ಒಂದು ಬಾರಿ ಪುಸ್ತಕ ಬಹುಮಾನ ಪಡೆದವರ ಕೃತಿಗಳನ್ನು ಮತ್ತದೇ ಪ್ರಕಾರದಲ್ಲಿ ಮುಂದಿನ ಮೂರು ವರ್ಷದವರೆಗೆ ಪರಿಗಣಿಸುವುದಿಲ್ಲ. ಒಬ್ಬ ಲೇಖಕರಿಗೆ ಮೂರು ಬಾರಿ ಬೇರೆ ಬೇರೆ ಪ್ರಕಾರಗಳಲ್ಲಿ ಬಹುಮಾನ ಪಡೆಯವ ಅವಕಾಶವಿದೆ.

2019ರ ಅವಧಿಯಲ್ಲಿ ಪ್ರಕಟವಾದ ಪುಸ್ತಕಗಳ ತಲಾ 4 ಪ್ರತಿಗಳನ್ನು ರಿಜಿಸ್ಟಾರ್, ಕರ್ನಾಟಕ ಸಾಹಿತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ ರಸ್ತೆ, ಬೆಂಗಳೂರು–560002 ಇವರಿಗೆ ರಿಜಿಸ್ಟ್ರಾರ್ ಅಂಚೆ, ಕೊರಿಯರ್ ಮೂಲಕ ಅಥವಾ ಖುದ್ದಾಗಿ 2020ರ ಸೆಪ್ಟೆಂಬರ್ 30 ರೊಳಗೆ ತಲುಪಿಸಬೇಕು.

ಕಳುಹಿಸಲ್ಪಡುವ ಕೃತಿಯ ಮೇಲೆ ತಿಳಿಸಿದ ಪ್ರಕಾರಗಳಲ್ಲಿ ಯಾವ ಸಾಹಿತ್ಯ ಪ್ರಕಾರಕ್ಕೆ ಸೇರುತ್ತೆ ಎನ್ನುವುದನ್ನು ಸ್ಪಷ್ಟವಾಗಿ ಪುಸ್ತಕದ ಶೀರ್ಷಿಕೆ ಪುಟದಲ್ಲಿ ಬರೆದಿರಬೇಕು ಎಂದು ಕನ್ನಡ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಎನ್. ಕರಿಯಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## GPF Annual Accounts Statements Released

Bengaluru, August 28, (Karnataka Information) :

The Pr. Accountant General (A&E), Karnataka, Park House Road, Bengaluru 560 001, informs that the Annual Accounts Statements for the year 2019-20 relating to General Provident Fund of the All India Service Officers Hon'ble Judges of High Court and Employees of Government of Karnataka, have been uploaded in office website.

The Pr . Accountant General (A&E) hereby informs, that the Subscribes can access their GPF Annual Accounts Statement through AG Karnataka website http:/www.agkar.cag.gov.in and download the Annual Statement for the year 2019-20.

In addition the GPF Annual Accounts Statements will be available form download at the Human Resource Management System website of Government of Karnataka http://www.hrmskarnataka.gov.in by the concerned DDos for the benefit of the GPF subscribers.

In case of GPF subscribes experiencing any difficulty relating to login to the website, they may contact this office through e-mail (agpf.kar@nic.in) or Phone Number -080-22640310.

In case of any discrepancy in accounting the subscription and withdrawal in their GPF Accounts, the Subscribers may write to Sr. Accounts Officer/Funds, Office of the Pr. Accountant General, Karnataka, park House, Road, Bengaluru-560 001.

## ಎಸಿಬಿ ದಾಳಿ

**ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :**

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ದಿ ನಿಗಮದಲ್ಲಿ ಅಕ್ರಮ – ಭ್ರಷ್ಟಾಚಾರದ ಹಣದ ವಹಿವಾಟು ನಡೆಯುತ್ತಿರುವ ಮಾಹಿತಿ ಬಂದ ಮೇರೆಗೆ ಭ್ರಷ್ಟಾಚಾರ ನಿಗ್ರಹ ದಳ ಬೆಂಗಳೂರು ನಗರ ಠಾಣೆಯಲ್ಲಿ ಪ್ರಕರಣ ದಾಖಲಿಸಿ ತನಿಖೆಯನ್ನು ಕೈಗೊಳ್ಳಲಾಗಿದೆ.

ಸದರಿ ಮಾಹಿತಿಯಲ್ಲಿ ಬಡ ಪರಿಶಿಷ್ಟ ಪಂಗಡದ ಭೂಹೀನ ರೈತರಿಗೆ ಸರ್ಕಾರದಿಂದ ಭೂಮಿ ಖರೀದಿಸಿ ನೀಡುವ ಯೋಜನೆಯನ್ನು ವಾಲ್ಮೀಕಿ ನಿಗಮವು ಭೂ ಒಡೆತನ ಯೋಜನೆ ಮೂಲಕ ಮಾಡುತ್ತಿದ್ದು ಈ ಯೋಜನೆಯಲ್ಲಿ ಅಕ್ರಮ ಅವ್ಯವಹಾರ ನಡೆಯುತ್ತಿದ್ದು ಕಡಿಮೆ ಗುಣಮಟ್ಟದ ಮತ್ತು ಕಡಿಮೆ ಬೆಲೆಯ ಭೂಮಿಯನ್ನು ಹೆಚ್ಚಿನ ಬೆಲೆಗೆ ಖಾಸಗಿ ಭೂ ಮಾಲೀಕರಿಂದ ಖರೀದಿಸುವ ಮೂಲಕ ಪ್ರತಿ ಎಕರೆಗೆ 4 ರಿಂದ 5 ಲಕ್ಷದ ವರೆಗೆ ಹೆಚ್ಚು ಬೆಲೆಗೆ ಖರೀದಿಸಿ ಹೆಚ್ಚುವರಿ ಹಣವನ್ನು ಮದ್ಯವರ್ತಿಗಳು ಮತ್ತು ಅಧಿಕಾರಿಗಳು ಹಂಚಿಕೊಳ್ಳುತ್ತಿದ್ದಾರೆ. ಈ ರೀತಿಯ ಭೂ ಒಡೆತನ ಯೋಜನೆಯ ಒಂದು ಪ್ರಕರಣದಲ್ಲಿ ಹಿಂದಿನ ಮಾರ್ಚ್

ತಿಂಗಳ ದಿನಾಂಕ ನಮೂದಿಸಿ ಕೆಲವು ಜಿಲ್ಲೆಗಳಿಗೆ ಹಣವನ್ನು ಬಿಡುಗಡೆ ಮಾಡಲು ಕಡತ ಸಿದ್ದವಾಗಿದ್ದು ಸದರಿ ಬಿಡುಗಡೆಯಾಗುವ ಮೊತ್ತದಲ್ಲಿ ಲಂಚದ ಹಣ ಕಛೇರಿಯ ವ್ಯವಸ್ಥಾಪಕ ಶ್ರೀ ಸುಬ್ಬಪ್ಪ ರವರ ಕೈ ಸೇರಲಿದ್ದು, ಈ ಲಂಚದ ಹಣವು ಕಛೇರಿಯ ಜನರಲ್ ಮ್ಯಾನೇಜರ್ ನಾಗೇಶ್ ರವರಿಗೆ ತಲುಪಲಿರುವ ಬಗ್ಗೆ ಮಾಹಿತಿ ಮೇರೆಗೆ ದಿನಾಂಕ: 27.08.2020 ರಂದು ಭ್ರಷ್ಟಾಚಾರ ನಿಗ್ರಹ ದಳ ಬೆಂಗಳೂರು ನಗರ ಠಾಣೆಯ ವಿವಿಧ ಅಧಿಕಾರಿಗಳ ತಂಡ ವಸಂತನಗರದಲ್ಲಿರುವ ಜಸ್ಮಾ ಭವನದ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ರಾಜ್ಯ ಕಛೇರಿಯ ಮೇಲೆ ದಾಳಿ ನಡೆಸಲಾಗಿರುತ್ತದೆ.

ಕಛೇರಿಯ ಶೋಧನಾ ಸಮಯದಲ್ಲಿ 22 ಲಕ್ಷದ 65 ಸಾವಿರ ಲಂಚದ ಹಣ ದೊರೆತಿದ್ದು, ನಂತರ ಖಚಿತ ಮಾಹಿತಿ ಮೇರೆಗೆ ನಾಗೇಶ್, ಜನರಲ್ ಮ್ಯಾನೇಜರ್ ಇವರ ಮನೆಯನ್ನು ಶೋಧನೆ ಮಾಡಲಾಗಿ ರೂ. 32 ಲಕ್ಷ 50 ಸಾವಿರ ನಗದು ಹಣ ಮತ್ತು ಸುಬ್ಬಯ್ಯ, ಮ್ಯಾನೇಜರ್ ಇವರ ಮನೆಯಲ್ಲಿ ರೂ.27 ಲಕ್ಷದ 50 ಸಾವಿರ ನಗದು ಹಣ ದೊರೆತಿದ್ದು ಕಛೇರಿ ಮತ್ತು ಮನೆಗಳಲ್ಲಿ ದೊರೆತ ಒಟ್ಟು ರೂ. 82 ಲಕ್ಷ 65 ಸಾವಿರ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ಶೋಧನಾ ಕಾರ್ಯವು ಮುಂದುವರೆದಿದ್ದು ಪ್ರಕರಣಕ್ಕೆ ಸಂಬಂಧಪಟ್ಟಂತೆ ನಾಗೇಶ್, ಜನರಲ್ ಮ್ಯಾನೇಜರ್, ಮಂಜುಳಾ, ಅಸಿಸ್ಟೆಂಟ್ ಜನರಲ್ ಮ್ಯಾನೇಜರ್ ಮತ್ತು ಸುಬ್ಬಯ್ಯ, ಮ್ಯಾನೇಜರ್ ಇವರುಗಳನ್ನು ದಸ್ತಗಿರಿ ಮಾಡಿದ್ದು, ಪ್ರಕರಣದ ತನಿಖೆ ಮುಂದುವರೆದಿದೆ.

## ಸೆ. 2ರಿಂದ ಶಿಕ್ಷಕಕರ ವರ್ಗಾವಣೆ ಪ್ರಕ್ರಿಯೆ ಆರಂಭ– ಸುರೇಶ್‍ಕುಮಾರ್:

ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :

ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರಾಥಮಿಕ ಮತ್ತು ಮಾಧ್ಯಮಿಕ ಶಿಕ್ಷಣ ಸಚಿವ ಎಸ್. ಸುರೇಶ್‍ಕುಮಾರ್, ಶಿಕ್ಷಕರ ವರ್ಗಾವಣೆ ಸಮಸ್ಯೆಗಳಿಗೆ ಶಾಶ್ವತವಾದ ಪರಿಹಾರವನ್ನು ದೊರಕಿಸುವ ನಿಟ್ಟಿನಲ್ಲಿ ಅತ್ಯಂತ ಶಿಕ್ಷಕಸ್ನೇಹಿಯಾದ ವರ್ಗಾವಣಾ ನೀತಿಯನ್ನು ನಾವು ಜಾರಿ ಮಾಡಿದ್ದೇವೆ. ಈ ಬಾರಿಯ ವರ್ಗಾವಣೆಗಳು ಇದೇ ಸೆಪ್ಟೆಂಬರ್ 2ರಿಂದ ಪ್ರಾರಂಭವಾಗುತ್ತವೆ. ಕಡ್ಡಾಯ ವರ್ಗಾವಣಾ ಶಿಕ್ಷೆ ಇನ್ನು ಮುಂದೆ ಶಿಕ್ಷಕರಿಗೆ ಇರುವುದಿಲ್ಲ. ಅದೇರೀತಿ ಕಳೆದ ಬಾರಿ ಈ ಶಿಕ್ಷೆಗೆ ಒಳಗಾಗಿದ್ದ ಶಿಕ್ಷಕರಿಗೆ ಈ ಬಾರಿ ಮೊದಲ ಆದ್ಯತೆಯ ವರ್ಗಾವಣೆ ಅವಕಾಶವನ್ನು ನೀಡಿದೊರಕಿಸಲಾಗುತ್ತದೆ ಎಂದರು.

ಕಳೆದ ಒಂದು ವರ್ಷದಲ್ಲಿ ಅತ್ಯಂತ ಕಠಿಣ ಸವಾಲುಗಳನ್ನು ನಾವು ಎದುರಿಸಿದ್ದೇವೆ. ಅಧಿಕಾರ ವಹಿಸಿಕೊಂಡ ಸಂದರ್ಭದಲ್ಲಿನ ನೆರೆ ಹಾವಳಿ, ಸಾವಿರಾರು ಶಾಲಾ ಕೊಠಡಿಗಳ ಧರೆಗುರುಳಿದವು, ಅವುಗಳನ್ನು ಪುನರ್ ನಿರ್ಮಿಸುವಜವಾಬ್ದಾರಿ, ಅದು ಸ್ವಲ್ಪತಹಬಂದಿಗೆ ಬರುವ ಸಂದರ್ಭದಲ್ಲಿ ಕೊರೋನಾ ಹಾವಳಿ, ವಿದ್ಯಾರ್ಥಿಗಳ ಭವಿಷ್ಯದ ದೃಷ್ಟಿಯಿಂದ ನಡೆಸಿಕೊಟ್ಟ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು, ಆನ್‌ಲೈನ್ ಶಿಕ್ಷಣದ ಕುರಿತಂತೆ ತೆಗೆದುಕೊಳ್ಳಲೇಬೇಕಾಗಿದ್ದ ನಿರ್ಣಯಗಳು, ಶಿಕ್ಷಕರ ವರ್ಗಾವಣಾ ನೀತಿ... ಹಲವು ಸವಾಲುಗಳು ನಮ್ಮನ್ನು ಬೆನ್ನಟ್ಟಿ ಬಂದವು. ಇಂತಹ ವಿಷಮ ಪರಿಸ್ಥಿತಿಯಲ್ಲೂ ಎಲ್ಲರ ಸಹಕಾರದಿಂದ ಇಲಾಖೆಯಲ್ಲಿ ಕೆಲ ಸಾಧನೆ ಮಾಡಲು ಸಾಧ್ಯವಾಗಿದೆ ಎಂದರು.

ಆನ್‌ಲೈನ್ ಶಿಕ್ಷಣ ಕುರಿತಂತೆ ನಾವು ರಚಿಸಿದ ತಜ್ಞರ ಸಮಿತಿ ಇಡೀ ರಾಷ್ಟ್ರದಲ್ಲಿಯೇ ವಿನೂತನವಾದ ಕ್ರಮವಾಗಿತ್ತು. ಆ ವರದಿ ಸಮಾಜದ ಎಲ್ಲ ಸ್ತರಗಳ ವಿದ್ಯಾರ್ಥಿಗಳಿಗೆ ಇಂತಹ ಸಂದರ್ಭದಲ್ಲಿ ಶಿಕ್ಷಣವನ್ನು ಮುಂದುವರೆಸುವ ಅತ್ಯಂತ ವಸ್ತುನಿಷ್ಠ ಸಲಹೆಗಳನ್ನು ನೀಡಿತ್ತು. ಅದರ ಆಧಾರದಲ್ಲಿ ಇಡೀರಾಷ್ಟ್ರದಲ್ಲೇ ಮೊದಲ ಬಾರಿಗೆ 'ವಿದ್ಯಾಗಮ' ಯೋಜನೆಯನ್ನು ನಾವು ಜಾರಿಗೆ ತಂದಿದ್ದೇವೆ. ನಮ್ಮ ಮಕ್ಕಳ ಕಲಿಕೆಗೆ ತೊಂದರೆಯಾಗದ ಆಕರ್ಷಕ ಕಲಿಕಾ ಪ್ರಕ್ರಿಯೆಯಲ್ಲಿ ತೊಡಗಿಸುವ ಮಾದರಿಉಪಕ್ರಮ ಇದಾಗಿದೆ ಎಂದುಅವರು ಹೇಳಿದರು.

ಮುಂದಿನ ದಿನಗಳ ಸವಾಲುಗಳು ದೊಡ್ಡದಿವೆ. ಶಿಕ್ಷಣ ವ್ಯವಸ್ಥೆಗೆ ಶಾಶ್ವತಕಾಯಕಲ್ಪದೊರಕಬೇಕಿದೆ. ಶಿಕ್ಷಕರ ನೇಮಕಾತಿ ಪ್ರಕ್ರಿಯೆಗೆ ವೃಂದ –ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಿದ್ದು, ಇಷ್ಟರಲ್ಲಿಯೇ ಚಾಲನೆ ನೀಡಲಾಗುತ್ತದೆ. 1000 ಉಭಯ ಮಾಧ್ಯಮ ತರಗತಿಗಳನ್ನು ಈ ಸಾಲಿನಿಂದ ಪ್ರಾರಂಭಿಸಲಾಗುತ್ತಿದೆ. ದೇಶದ ಶಿಕ್ಷಣ ವ್ಯವಸ್ಥೆಗೆ ಹೊಸ ದಿಕ್ಕು ತೋರಿರುವ ನೂತನ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ನಮ್ಮ ರಾಜ್ಯ ಅಳವಡಿಸಿಕೊಳ್ಳುವ ಬಗ್ಗೆ ಈಗಾಗಲೇ ಮಾರ್ಗದರ್ಶಿ ಸೂತ್ರಗಳನ್ನು ರಚಿಸಲಾಗಿದ್ದು, ಇಷ್ಟರಲ್ಲಿಯೇ ಸರ್ಕಾರಕ್ಕೆ ಸಲ್ಲಿಕೆಯಾಗುತ್ತಿದೆ.

ಮಂಡಳಿಗಳ ವಿಲೀನ– ಸ್ವಾಭಿಮಾನಿ ಶಾಲೆ– ಆದರ್ಶ ಶಿಕ್ಷಕ:ಪರೀಕ್ಷಾ ಪ್ರಕ್ರಿಯೆ ಸುಲಲಿತವಾಗಿ ನಿರ್ವಹಣೆಯಾಗಲು ಪದವಿ ಪೂರ್ವ ಹಾಗೂ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಗಳನ್ನು ವಿಲೀನಗೊಳಿಸಲಾಗುತ್ತಿದೆ. ಸರ್ಕಾರಿ ಶಾಲೆಗಳನ್ನು 'ಸ್ವಾಭಿಮಾನಿ ಶಾಲೆ' ಗಳನ್ನಾಗಿ ರೂಪಿಸಲಾಗುತ್ತಿದ್ದು, ಉತ್ತಮ ಶಾಲೆಗಳಿಗೆ ಈ ವರ್ಷದಿಂದ ಪ್ರಶಸ್ತಿ ನೀಡಲಾಗುತ್ತದೆ. ಉತ್ತಮ ಶಿಕ್ಷಕರನ್ನು ಗುರುತಿಸಿ ಅವರನ್ನು 'ಆದರ್ಶ ಶಿಕ್ಷಕ' ಎಂದು ಗೌರವಿಸಲಾಗುತ್ತದೆ. ಅವರ ಬೋಧನಾ ಕ್ರಮಗಳನ್ನು ಇತರೆಡೆ ಅಳವಡಿಸಿಕೊಳ್ಳುವಲ್ಲಿ ಕಾರ್ಯತಂತ್ರಗಳನ್ನು ಅನುಷ್ಠಾನಗೊಳಿಸಲಾಗುತ್ತದೆ ಎಂದು ಸುರೇಶ್‌ಕುಮಾರ್ ಹೇಳಿದರು.

ಶಿಕ್ಷಣ ಪರಿಷತ್ ಸ್ಥಾಪನೆ: ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ವ್ಯವಸ್ಥೆಗೆಕಾ ಯಕಲ್ಪ ದೊರಕಿಸುವ ನಿಟ್ಟಿನಲ್ಲಿ ಶಿಕ್ಷಣ ಪರಿಷತ್ತಿನ ಸ್ಥಾಪನೆಗೆ ಕ್ರಮ ವಹಿಸಲಾಗುತ್ತದೆ ಎಂದು ಅವರು ಹೇಳಿದರು. ಇಂದು ಲೋಕಾರ್ಪಣೆಗೊಂಡಿರುವ ತಂತ್ರಜ್ಞಾನಧಾರಿತ ಉಪಕ್ರಮಗಳು ನಮ್ಮ ಸರ್ಕಾರದ ಬದ್ಧತೆಯ ಪ್ರತೀಕವಾಗಿದೆ. ಇವು ಜನರಲ್ಲಿ ಆಡಳಿತದ ಭರವಸೆಯನ್ನು ಮೂಡಿಸುವಲ್ಲಿ ಸಹಕಾರಿ ಆಗಲಿವೆ ಎಂದು ಅವರು ಹೇಳಿದರು.

ಇಲಾಖೆಯಲ್ಲಿ ಒಂದು ವರ್ಷದಲ್ಲಿ ತಮ್ಮ ಕೆಲಸಗಳ ಕುರಿತು ಮುಖ್ಯಮಂತ್ರಿಯವರ ಪ್ರಶಂಸನಾತ್ಮಕ ನುಡಿಗಳಿಗೆ ಪ್ರತಿಕ್ರಿಯಿಸಿದ ಅವರು, ಮುಖ್ಯಮಂತ್ರಿಗಳು ನನ್ನ ಮೇಲಿಟ್ಟ ಭರವಸೆಗೆ ಅನುಗುಣವಾಗಿ ನಡೆದುಕೊಂಡಿದ್ದೇನೆಂಬ ಸಮಾಧಾನ ನನ್ನದಾಗಿದೆ ಎಂದರು.

## ಗಣಿ ಇಲಾಖೆಯ ಉನ್ನತಮಟ್ಟದ ಸಭೆ

**ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :**

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಅಧ್ಯಕ್ಷತೆಯಲ್ಲಿ ಇಂದು ಕೇಂದ್ರ ಸರ್ಕಾರದಲ್ಲಿ ರಾಜ್ಯದ ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ ಸಂಬಂಧಿಸಿದಂತೆ ಬಾಕಿ ಇರುವ ವಿಷಯಗಳ ಬಗ್ಗೆ ಉನ್ನತ ಮಟ್ಟದ ಸಭೆ ಜರುಗಿತು.

ಕೇಂದ್ರ ಗಣಿ ಮತ್ತು ಭೂ ವಿಜ್ಞಾನ ಸಚಿವ ಪ್ರಹ್ಲಾದ ಜೋಶಿ, ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್, ಗಣಿ ಮತ್ತು ಭೂ ವಿಜ್ಞಾನ ಸಚಿವ ಸಿ.ಸಿ.ಪಾಟೀಲ್, ಕಂದಾಯ ಸಚಿವ ಆರ್.ಅಶೋಕ್, ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್ ಹಾಗೂ ಕೇಂದ್ರ ಗಣಿ ಇಲಾಖೆ ಕಾರ್ಯದರ್ಶಿ ಅನಿಲ್ ಕುಮಾರ್ ಜೈನ್ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ವಾಣಿಜ್ಯ ಇಲಾಖೆ ಒಂದು ವರ್ಷದ ಸಾಧನೆ -ಪುಸ್ತಕ ಬಿಡುಗಡೆ

**ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :**

ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್ ಅವರು ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಲಾಖೆ ಒಂದು ವರ್ಷದ ಸಾಧನೆಯ "ಸ್ಪಷ್ಟ ಗುರಿ, ದಿಟ್ಟ ಕ್ರಮಗಳ ಒಂದು ವರ್ಷ" ಪುಸ್ತಕ ಬಿಡುಗಡೆಗೊಳಿಸಿದರು.

## ಕೈಗಾರಿಕಾ ಸ್ನೇಹಿ ರಾಜ್ಯವಾಗಿಸುವ ನಿಟ್ಟಿನಲ್ಲಿ ಧೃಢ ಹೆಜ್ಜೆ – ಸಚಿವ ಜಗದೀಶ್ ಶೆಟ್ಟರ್

**ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :**

ಕೈಗಾರಿಕಾ ಸ್ನೇಹಿ ರಾಜ್ಯವನ್ನಾಗಿಸುವ ನಿಟ್ಟಿನಲ್ಲಿ ಧೃಡ ಹೆಜ್ಜೆ ಇಡಲಾಗಿದೆ ಎಂದು ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್ ಅವರು ತಿಳಿಸಿದರು.

ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇಂದು ಏರ್ಪಡಿಸಿದ್ದ ಒಂದು ವರ್ಷದ ಇಲಾಖೆಯ ಸಾಧನೆಯ ಸ್ಪಷ್ಟ ಗುರಿ ದಿಟ್ಟ ಕ್ರಮಗಳು ಪುಸ್ತಕವನ್ನು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಲೋಕಾರ್ಪಣೆ ಮಾಡಿದ ನಂತರ ಸುದ್ದಿಗಾರರರೊಂದಿಗೆ ಮಾತನಾಡಿದ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವ ಜಗದೀಶ್ ಶೆಟ್ಟರ್ ಅವರು ಕರ್ನಾಟಕ ರಾಜ್ಯ ಕೈಗಾರಿಕಾ ಕ್ಷೇತ್ರದಲ್ಲಿ ಕಳೆದೊಂದು ವರ್ಷದಲ್ಲಿ ಅಮೂಲಾಗ್ರ ಬದಲಾವಣೆಯನ್ನು ಕಂಡಿದೆ. ಸೂಕ್ಷ್ಮ, ಸಣ್ಣ, ಮಧ್ಯಮ ಹಾಗೂ ಬೃಹತ್ ಕೈಗಾರಿಕೆಗಳ ಸ್ಥಾಪನೆಗೆ ಸರಳ ನಿಯಮಗಳ ಕಾನೂನು ಜಾರಿಗೊಳಿದ ಪ್ರಥಮ ರಾಜ್ಯ ನಮ್ಮದು ಎನ್ನುವ ಹೆಗ್ಗಳಿಕೆ ಪಾತ್ರವಾಗಿದೆ ಎಂದರು.

ಜನವರಿ ತಿಂಗಳಲ್ಲಿ ದಾವೋಸ್‌ನಲ್ಲಿ ನಡೆದ ವಿಶ್ವ ಆರ್ಥಿಕ ಸಮ್ಮೇಳನದಲ್ಲಿ ಮುಖ್ಯಮಂತ್ರಿ ಅವರ ನೇತೃತ್ವದಲ್ಲಿ ವಿಶ್ವದ ಪ್ರಮುಖ ಕೈಗಾರಿಕೋದ್ಯಮಿಗಳನ್ನು ಭೇಟಿ ಮಾಡಲಾಯಿತು. ಭೇಟಿಯ ಸಂದರ್ಭದಲ್ಲಿ ಕೈಗಾರಿಕಾ ಕ್ಷೇತ್ರಕ್ಕೆ ಅಗತ್ಯವಿರುವ ಬದಲಾವಣೆಗಳ ಬಗ್ಗೆ ಕೈಗಾರಿಕೋದ್ಯಮಗಳಿಂದ ಸಲಹೆಗಳನ್ನು ಪಡೆದು ಸುಮಾರು **40** ಕ್ಕೂ ಹೆಚ್ಚು ಸಂಘ ಸಂಸ್ಥೆಗಳು, ಉದ್ಯಮಗಳು ಮತ್ತು ಉದ್ಯಮದಲ್ಲಿ ತೊಡಗಿಸಿಕೊಂಡಿರುವ ಮುಖಂಡರುಗಳನ್ನು ಭೇಟಿ ಮಾಡಿ ಚರ್ಚಿಸಲಾಯಿತು ಎಂದು ಸಚಿವರು ತಿಳಿಸಿದರು.

ನೂತನ ಕೈಗಾರಿಕಾ ನೀತಿ **2020–25** ರಲ್ಲಿ ಕರ್ನಾಟಕ ಕೈಗಾರಿಕಾ ಶಕ್ತಿಬಳಸಿಕೊಂಡು ಕೈಗಾರೀಕರಣಕ್ಕಾಗಿ ಪರಿಸರವನ್ನು ಶಕ್ತಿಗೊಳಿಸುವುದು ಮೂಲ ಸೌಲಭ್ಯ ಅಭಿವೃದ್ಧಿ, ರಾಜ್ಯದ ಜನರಿಗೆ ವಿಶೇಷವಾಗಿ ಕೈಗಾರಿಕಾ ಅಭಿವೃದ್ಧಿಯಲ್ಲಿ ಹಿಂದುಳಿದ ಜಿಲ್ಲೆಗಳಲ್ಲಿ ಹಾಗೂ ಟಯರ್ **–2** ಮತ್ತು ಟಯರ್ **–3** ನಗರಗಳಲ್ಲಿ ಸಮಾನ ಅವಕಾಶಗಳನ್ನು ಒದಗಿಸುವುದು ಹಾಗೂ ಬಂಡವಾಳ ಹೂಡಿಕೆಯ ಅಭಿವೃದ್ಧಿಯನ್ನು ರಾಜ್ಯದಲ್ಲಿ ಖಾತರಿಪಡಿಸಲಾಗುವುದು ಎಂದು ಸಚಿವ ಜಗದೀಶ್ ಶೆಟ್ಟರ್ ಅವರು ತಿಳಿಸಿದರು.

ಕರೋನ ಲಾಕ್‌ಡೌನ್ ಸಂದರ್ಭದಲ್ಲಿ ರಾಜ್ಯದಲ್ಲಿ **138** ಯೋಜನೆಗಳ ಮೂಲಕ **31,676.57** ಕೋಟಿ ರೂಪಾಯಿಗಳ ಬಂಡವಾವನ್ನು ರಾಜ್ಯದಲ್ಲಿ ಹೂಡಿಕೆ ಮಾಡಲು ವಿವಿಧ ಕಂಪನಿಗಳು ಮುಂದಾಗಿವೆ ಇದರಿಂದಾಗಿ **65,459** ಉದ್ಯೋಗ ಸೃಷ್ಠಿಯಾಗಲಿವೆ ಎಂದು ಸಚಿವರು ಇದೇ ಸಂದರ್ಭದಲ್ಲಿ ತಿಳಿಸಿದರು. ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಸೆಪ್ಟೆಂಬರ್ 19 ರಂದು ರಾಜ್ಯಾದ್ಯಂತ ಮೇಗಾ ಇ-ಲೋಕ್‍ಅದಾಲತ್- ನ್ಯಾಯಮೂರ್ತಿ ಅರವಿಂದ ಕುಮಾರ್

ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :

ರಾಜ್ಯಾದ್ಯಂತ ಸೆಪ್ಟೆಂಬರ್ 19 ರಂದು ರಾಜ್ಯಾದ್ಯಂತ ಮೇಗಾ ಇ-ಲೋಕ್‍ಅದಾಲತ್- ನ್ನು ಪ್ರಪ್ರಥಮವಾಗಿ ಅನುಷ್ಠಾನಗೊಳಿಸಲಾಗುವುದೆಂದು ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷರಾದ ಅರವಿಂದ ಕುಮಾರ್ ಅವರು ತಿಳಿಸಿದರು.

ಅವರು ಇಂದು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಮೇಗಾ ಇ-ಲೋಕ್‍ಅದಾಲತ್- ಅನುಷ್ಠಾನ ಕುರಿತು ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ರಾಜ್ಯದ ನ್ಯಾಯಾಂಗ ಇತಿಹಾಸದಲ್ಲಿ ಪ್ರಪ್ರಥಮ ಪ್ರಯೋಗವಾಗಿದ್ದು ಉಭಯ ಕಕ್ಷಿಗಾರರು ನ್ಯಾಯಾಲಯಕ್ಕೆ ವಿಡಿಯೋ ಕಾನ್ಫರೆನ್ಸ್ ಮೂಲಕ ಹಾಜರಾಗಿ ಪ್ರಕರಣವನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶವಿದ್ದು ನ್ಯಾಯಾಲಯಕ್ಕೆ ಖುದ್ದಾಗಿ ಹಾಜರಾಗುವ ಅವಶ್ಯಕತೆ ಇರುವುದಿಲ್ಲ.

ಮೋಟಾರು ಅಪಘಾತ ನ್ಯಾಯಾಧೀಕರಣ ಪ್ರಕರಣಗಳು, ಹಣಕಾಸು ಸಂಸ್ಥೆಗಳಿಗೆ ಸಂಬಂಧಿಸಿದ ಪ್ರಕರಣಗಳು, ನೆಗೋಷಿಯೇಬಲ್ ಅಧಿನಿಯಮದ ಪ್ರಕರಣಗಳು ಸೇರಿದಂತೆ ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು ಕೌಟುಂಬಿಕ ನ್ಯಾಯಾಲಯಗಳು ಮತ್ತಿತರ ಪ್ರಕರಣಗಳಿಗೆ ಸಂಬಂಧಿಸಿದಂತೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪರಿಹಾರ ಕಂಡುಕೊಳ್ಳಬಹುದು.

ಕೋವಿಡ್ 19 ರೋಗವು ಸರ್ವವ್ಯಾಪ್ತಿಯಾಗುತ್ತಿರುವ ಸಂದರ್ಭದಲ್ಲಿ ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು, ದೊಡ್ಡದೊಡ್ಡ ಸಂಖ್ಯೆಯಲ್ಲಿ ಕಕ್ಷಿಗಾರರು ಗುಂಪು ಸೇರುವುದನ್ನು ತಪ್ಪಿಸಲು ಮತ್ತು ಸ್ವಚ್ಛತೆಯನ್ನು ಕಾಪಾಡಿಕೊಳ್ಳುವುದು ಅಗತ್ಯವಾಗಿದ್ದು ಈ ನಿಟ್ಟಿನಲ್ಲಿ ಎಲ್ಲರಿಗೂ ಸಮಾನ ಅವಕಾಶ ಕಲ್ಪಿಸಿ ಪರಿಹಾರ ಒದಗಿಸಲು ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಕ್ಷಿಗಾರರು ಮೇಗಾ ಇ-ಲೋಕ್‍ಅದಾಲತ್- ನ್ನು ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ನ್ಯಾಯಾಧೀಶರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ಉಚ್ಚನ್ಯಾಯಾಲಯದ ಕಾನೂನು ಸೇವಾ ಸಮಿತಿ ಅಧ್ಯಕ್ಷರಾದ ಅಲೋಕ್ ಅರಾಧೆ ಹಾಗೂ ವಕೀಲರುಗಳು ಉಪಸ್ಥಿತರಿದ್ದರು.

ಛಾಯಾಚಿತ್ರ ಲಗತ್ತಿಸಲಾಗಿದೆ)